# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 123
ಸದಸ್ಯರ ಹೆಸರು : ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 09-12-2024
ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| ಪ್ರಶ್ನೆ | | ಉತ್ತರ |
|---|---|---|
| ಅ) | ಸರ್ಕಾರ ಕಳೆದ ಸುಮಾರು 25 ವರ್ಷಗಳಿಂದ ಬಡ ರೈತರಿಗೆ ಜಮೀನುಗಳ ನೀರಾವರಿ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ 10 ಹೆಚ್.ಪಿ. ವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುವ ಕಾರ್ಯಕ್ರಮ ರಾಜ್ಯದಾದ್ಯಂತ ಜಾರಿಯಲ್ಲಿದ್ದು, ಇದೇ ಕಾರ್ಯಕ್ರಮಕ್ಕೆ ಅನುಗುಣವಾಗಿ ಪ್ರತಿಯೊಂದು ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮ ಮಾಡುವ ಕಾರ್ಯಕ್ರಮ ಕೂಡ ಜಾರಿಯಲ್ಲಿ ಇದೆಯೇ; | ರಾಜ್ಯದಲ್ಲಿ 10 ಹೆಚ್.ಪಿ ವರೆಗಿನ ನೀರಾವರಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ತನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: KEB/B10/B/6925/90-91 ದಿನಾಂಕ:30.06.1992 ರಿಂದ ಜಾರಿಗೆ ಬರುವಂತೆ ಆದೇಶಿಸಿದೆ.<br><br>ಪ್ರಸ್ತುತ, ಪಂಪ್‌ಸೆಟ್‌ಗಳನ್ನು ವಿದ್ಯುತ್ ಜಾಲಕ್ಕೆ ವ್ಯವಸ್ಥಿತವಾಗಿ ಸೇರ್ಪಡೆಗೊಳಿಸಲು ಮತ್ತು Stand-alone/off grid ಪಂಪ್ ಅಳವಡಿಕೆ ಹಾಗೂ IP set feeder ಗಳ ಸೌರೀಕರಣವನ್ನು ಅನುಷ್ಠಾನಗೊಳಿಸಿ ರೈತರ ಪಂಪ್ ಸೆಟ್ ಗಳಿಗೆ ಹಗಲಿನ ವೇಳೆಯಲ್ಲಿಯೇ ವಿದ್ಯುತ್ ಒದಗಿಸುವ ನಿಟ್ಟಿನಲ್ಲಿ ಎನರ್ಜಿ/ವಿಎಸ್‌ಸಿ/214/2023, ದಿನಾಂಕ 7.10.2023 ರಂದು ಆದೇಶವನ್ನು ಹೊರಡಿಸಲಾಗಿದ್ದು, ಅದರಂತೆ, |
| ಆ) | ಹಾಗಿದ್ದಲ್ಲಿ, ಸರ್ಕಾರ ಏಕಾಏಕಿ ಕಳೆದ 22-09-2023 ರಲ್ಲಿ ಆದೇಶ ಮಾಡಿ ಈ ಬಹುಪಯೋಗಿ ರೈತರ ಯೋಜನೆ ನಿಲ್ಲಿಸಿದ್ದು, ಏಕೆ? (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು | 1. ವಿದ್ಯುತ್ ಸರಬರಾಜು ಕಂಪನಿಗಳು ಸಕ್ರಮಗೊಳಿಸಿದ ಕೃಷಿ ಪಂಪ್ ಸೆಟ್ ಗಳಿಗೆ 2022-23 ಮತ್ತು 2023-24 ರಲ್ಲಿ ಟೆಂಡರ್ ಮೂಲಕ ಮೂಲಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಟೆಂಡರ್ ಕರೆಯಲಾದ ಅಂದಾಜುಪಟ್ಟಿಯನ್ನು ಪುನರ್ ಪರಿಶೀಲಿಸಿ, ಪಂಪ್ ಸೆಟ್ ಗಳು ಹಾಲಿ ಇರುವ ವಿದ್ಯುತ್ ಜಾಲದಿಂದ 500 ಮೀಟರ್ ಯಿಂದಾಚೆಯಿದ್ದಲ್ಲಿ, Solar Stand -alone /off grid ಪಂಪ್ ಅಳವಡಿಸಲು ಕ್ರಮವಹಿಸಲಾಗುತ್ತಿದೆ ಮತ್ತು 500 ಮೀಟರ್ ಒಳಗಿರುವ ಪಂಪ್‌ಸೆಟ್ ಗಳಿಗೆ ಕನಿಷ್ಟ ಅವಶ್ಯಕತೆಗೆ ತಕ್ಕಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ವಿದ್ಯುತ್ ಸರಬರಾಜು ಕಂಪನಿಗಳು ಕ್ರಮವಹಿಸುತ್ತಿವೆ.<br><br>2. ಸೌರ ಪಂಪ್‌ಸೆಟ್ ಗಳನ್ನು ಉತ್ತೇಜಿಸಲು ಕೇಂದ್ರ ಸರ್ಕಾರದಿಂದ ಶೇ. 30 ರಷ್ಟು ಸಹಾಯಧನ ಅಲ್ಲದೆ ರಾಜ್ಯ ಸರ್ಕಾರದಿಂದ ಶೇ. 30 ರಷ್ಟು ಇರುವ ಸಹಾಯಧನವನ್ನು ಶೇ. 50 ಕ್ಕೆ ಹೆಚ್ಚಿಸಿ ಸರ್ಕಾರ ಅನುಮೋದಿಸಿದೆ. ರೈತರು ಈಗಾಗಲೇ |

| | | |
|---|---|---|
| | | ವಿದ್ಯುತ್ ಸಂಪರ್ಕಕ್ಕಾಗಿ ಮೊತ್ತವನ್ನು ಪಾವತಿಸಿದ್ದರೆ, ಪಾವತಿಸಿದ ಮೊತ್ತವನ್ನು ರೈತರ ವಂತಿಗೆ ಎಂದು ಪರಿಗಣಿಸಿ, ಸೌರ ಪಂಪ್‌ಸೆಟ್ ಗಳನ್ನು ಅಳವಡಿಸಬೇಕಾಗಿದೆ.<br><br>ದಿನಾಂಕ 22.9.2023 ರ ಹಿಂದೆ ನೋಂದಣಿಗೊಂಡಿದ್ದ ಪಂಪ್ ಸೆಟ್‌ಗಳ ಪೈಕಿ, ಹಾಲಿ ಇರುವ ವಿದ್ಯುತ್ ಜಾಲದಿಂದ 500 ಮೀಟರ್ ಒಳಗಿರುವ 37,999 ಪಂಪ್‌ಸೆಟ್‌ಗಳಿಗೆ ಪರಿವರ್ತಕಗಳೂ ಸೇರಿದಂತೆ ವಿದ್ಯುತ್ ಮೂಲಸೌಕರ್ಯ ರಚನೆಯೊಂದಿಗೆ ಮತ್ತು ಪ್ರಸಕ್ತ ಸಾಲಿನಲ್ಲಿ 1,20,429 ಪಂಪ್‌ಸೆಟ್‌ಗಳಿಗೆ ಲಭ್ಯವಿರುವ ಮೂಲಸೌಕರ್ಯದೊಂದಿಗೆ Service main ಮುಖಾಂತರ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.<br><br>ಕುಸುಮ್ -ಬಿ ಅಡಿಯಲ್ಲಿ Auto Registration ಮೂಲಕ ಈವರೆಗೆ 10,151 ಅರ್ಜಿಗಳನ್ನು ನೋಂದಾಯಿಸಿಕೊಳ್ಳಲಾಗಿದೆ. ಇದಲ್ಲದೆ, ಹೊಸದಾಗಿ 28,096 ಅರ್ಜಿಗಳು ಸೌರ ಪಂಪ್ ಅಳವಡಿಕೆಗೆ ನೋಂದಣಿಗೊಂಡಿವೆ. ಈವರೆಗೆ ಒಟ್ಟು 232 ಸಂಖ್ಯೆಯ ಸೌರ ಪಂಪ್‌ಸೆಟ್‌ಗಳನ್ನು ಅಳವಡಿಸಿ ಚಾಲನೆಗೊಳಿಸಲಾಗಿದೆ. |

ಸಂಖ್ಯೆ: ಎನರ್ಜಿ 323 ಇಬಿಎಸ್ 2024

**(ಕೆ.ಜೆ.ಜಾರ್ಜ್)**
**ಇಂಧನ ಸಚಿವರು**